# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,

# ಟಿ. ನರಸೀಪುರ.

## ಸಿ. ಸಿ ನಂ. 301/2017

ಪಿರ್ಯಾದಿದಾರರು : ಸರ್ಕಾರ ಪರವಾಗಿ ಬನ್ನೂರು ಪೊಲೀಸ್ ಠಾಣೆ

ವಿರುದ್ಧ

ಆರೋಪಿತರು : 2. ಇಮ್ರಾನ್ @ ಶಿವಮೊಗ್ಗ ಬಿನ್.ಜಬಿಉಲ್ಲಾ, 25 ವರ್ಷ,
ವಾಸಃ 21 ನೇ ವಾರ್ಡ್, ನ್ಯೂ ಸ್ಟ್ರೈಟ್,
ಮುಸ್ಲಿಂ ಬ್ಲಾಕ್, ಕೆ.ಆರ್.ನಗರ ಟೌನ್ ಮತ್ತು ತಾಲ್ಲೂಕು,
ಮೈಸೂರು ಜಿಲ್ಲೆ.

5. ಸಾದಿಖ್ ಬಿನ್ ಮಕ್ಬುಲ್, 30 ವರ್ಷ,
ವಾಸಃ ನಂ.385, 15 ನೇ ಕ್ರಾಸ್, ಸುಲ್ತಾನ್ ಬ್ಲಾಕ್,
ಗೌಸಿಯಾ ನಗರ, ಮೈಸೂರು ಸಿಟಿ.

## ದೋಷಾರೋಪಣೆ

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ದೋಷಾರೋಪಣೆಯನ್ನು ಮಾಡುತ್ತೇನೆ.**

ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಏನೆಂದರೆ

ದಿಃ 20.07.2016 ರಂದು ರಾತ್ರಿ ಸಮಯದಲ್ಲಿ ಟಿ.ನರಸೀಪುರ ತಾಲ್ಲೂಕು ಬನ್ನೂರು ಪೊಲೀಸ್ ಠಾಣಾ ಸರಹದ್ದು ಕಟ್ಟೆ ಕೊಪ್ಪಲು ಗ್ರಾಮದಲ್ಲಿರುವ ಸಿದ್ದಾಪ್ವಾಜಿ ದೇವಸ್ಥಾನದ ಬಾಗಿಲಿಗೆ ಹಾಕಿದ ಬೀಗವನ್ನು ಕಬ್ಬಿಣದ ರಾಡಿನಿಂದ ಮೀಟಿ ಬಾಗಿಲು ತೆಗೆದು ಒಳ ಪ್ರವೇಶಿಸಿ ಕಳ್ಳತನ ಮಾಡಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.457 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ, ಆರೋಪಿತರಾದ ನೀವು ಸಿದ್ದಾಪ್ವಾಜಿ ದೇವಸ್ಥಾನದ ಬಾಗಿಲಿಗೆ ಹಾಕಿದ ಬೀಗವನ್ನು ಕಬ್ಬಿಣದ

ರಾಡಿನಿಂದ ಮೀಟಿ ಬಾಗಿಲು ತೆಗೆದು ಒಳ ಪ್ರವೇಶಿಸಿ 10 ಕಂಡಾಯಗಳು, 2 ಮಂಗಳಾರತಿ ತಟ್ಟೆ, 4 ಹಿತ್ತಾಳೆ ಜಾಗಟೆಗಳು, 5 ಹಿತ್ತಾಳೆ ಗಂಟೆಗಳನ್ನು ಕಳ್ಳತನ ಮಾಡಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.380 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ಅಪರಾಧಗಳಿಗಾಗಿ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡತಕ್ಕದ್ದು.

ದಿನಾಂಕಃ 26.12.2025.

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.**
**ಟಿ. ನರಸೀಪುರ.**

**<u>ಆರೋಪಿತರ ಹೇಳಿಕೆ</u>**

ಪ್ರಶ್ನೆ- 1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ 2 ನೇ ಆರೋಪಿಃ

5 ನೇ ಆರೋಪಿಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?

ಉತ್ತರಃ 2 ನೇ ಆರೋಪಿಃ

5 ನೇ ಆರೋಪಿಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿತರಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ. ಎಫ್.ಸಿ., ಟಿ.ನರಸೀಪುರ.**

**<u>ಆರೋಪಿತರ ಸಹಿ</u>**

2 ನೇ ಆರೋಪಿಃ

5 ನೇ ಆರೋಪಿಃ